**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ಶೈವಿ/22/ಸುತ್ತೋಲೆ/2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು-560001.
ದಿನಾಂಕ: 22.01.2024.

**ಸುತ್ತೋಲೆ**

**ವಿಷಯ :** ಗಾಂಧೀಜಿಯವರ ತತ್ವಚಿಂತನೆಗಳ ಕುರಿತು ಯುವಜನರಲ್ಲಿ ಅರಿವು ಮೂಡಿಸುವ ಬಗ್ಗೆ.
**ಉಲ್ಲೇಖ :** ಮಾನ್ಯ ಮುಖ್ಯಮಂತ್ರಿಯವರ ಪತ್ರಸಂಖ್ಯೆ : ಮು.ಮಂ/ಆಕಾ/2024, ದಿನಾಂಕ : 19.01.2024

********

**ಪೀಠಿಕೆ:** ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರು ತಮ್ಮ ಜೀವಿತಾವಧಿಯುದ್ದಕ್ಕೂ ಶಾಂತಿ, ಅಹಿಂಸೆ, ಸತ್ಯ, ವಿಕೇಂದ್ರೀಕರಣ, ಸಾಮಾಜಿಕ ನ್ಯಾಯ ಮತ್ತು ಜೀವಪರ ನಿಲುವುಗಳನ್ನು ಆಚರಿಸಿ ಪ್ರತಿಪಾದಿಸಿದ್ದರು. ಗಾಂಧೀಜಿಯವರ ನಂತರವೂ ದೇಶ ಅವರ ಆದರ್ಶಗಳನ್ನು ಪಾಲಿಸುತ್ತಲೇ ಬಂದಿದೆ. ಆದರೆ ಇತ್ತೀಚೆಗೆ ಸಂಕುಚಿತ ಆಲೋಚನೆಯ ಪ್ರಭಾವಕ್ಕೆ ಒಳಗಾಗಿ ದೇಶದಲ್ಲಿ ದ್ವೇಷ-ಹಿಂಸೆ ಕೇಂದ್ರೀಕರಣ ಮನೋಭಾವ, ದೇಶಭಾಷೆಗಳ ಅಳಿವು, ದಮನಿತರ-ಜನಸಾಮಾನ್ಯರ ಹಕ್ಕುಗಳನ್ನು ಕಿತ್ತುಕೊಳ್ಳುವ ಪ್ರವೃತ್ತಿಗಳು ಮುನ್ನೆಲೆಗೆ ಬರುತ್ತಿವೆ. ಸ್ವಾತಂತ್ರ್ಯ ಹೋರಾಟದ ನೇತೃತ್ವ ವಹಿಸಿದ ಗಾಂಧೀಜಿಯವರ ಚಿಂತನೆಗಳಲ್ಲಿ ಬಹುತೇಕ ಸಮಸ್ಯೆಗಳಿಗೆ ಪರಿಹಾರವಿದೆ. ಈ ಹಿನ್ನೆಲೆಯಲ್ಲಿ ಗಾಂಧೀಜಿಯವರ ತತ್ವಚಿಂತನೆಗಳ ಕುರಿತು ಯುವಜನರಲ್ಲಿ ಅರಿವು ಮೂಡಿಸಬೇಕಾದ ಅಗತ್ಯ ಹಿಂದೆಂದಿಗಿಂತಲೂ ಹೆಚ್ಚಾಗಿದೆ.

ಸನ್ಮಾನ್ಯ ಮುಖ್ಯಮಂತ್ರಿಗಳ ಪತ್ರದಲ್ಲಿ "ದೇಶದಲ್ಲಿ ದ್ವೇಷ-ಹಿಂಸೆ ಕೇಂದ್ರೀಕರಣ ಮನೋಭಾವ, ದೇಶಭಾಷೆಗಳ ಅಳಿವು, ದಮನಿತರ-ಜನಸಾಮಾನ್ಯರ ಹಕ್ಕುಗಳನ್ನು ಕಿತ್ತುಕೊಳ್ಳುವ ಪ್ರವೃತ್ತಿಗಳು ಮುನ್ನೆಲೆಗೆ ಬರುತ್ತಿರುವ ಹಿನ್ನೆಲೆಯಲ್ಲಿ ಗಾಂಧೀಜಿಯವರ ತತ್ವ ಆದರ್ಶಗಳನ್ನು ಯುವಜನರಿಗೆ ಪರಿಚಯಿಸಬೇಕಾದ ಅಗತ್ಯದ ಕುರಿತು ಪ್ರಸ್ತಾಪಿಸಿಲಾಗಿದೆ ಹಾಗೂ ಪದವಿ, ಸ್ನಾತಕೋತ್ತರ ಪದವಿ ಹಾಗೂ ಸಂಶೋಧನಾ ವಿದ್ಯಾರ್ಥಿಗಳಿಗೆ ಪ್ರಬಂಧಸ್ಪರ್ಧೆಗಳನ್ನು ಏರ್ಪಡಿಸುವ ಮೂಲಕ "21ನೇ ಶತಮಾನದ ಆತಂಕಗಳು ಮತ್ತು ಗಾಂಧೀಜಿಯವರ ವಿಚ್ಛಗಳು ಪ್ರತಿಪಾದಿಸುವ ಪರಿಹಾರಗಳು" ಎಂಬ ವಿಷಯದ ಕುರಿತು ಪ್ರಬಂಧಸ್ಪರ್ಧೆಯನ್ನು ನಡೆಸಿ, ವಿಜೇತರಾದ ಪ್ರತಿ ತರಗತಿಯ ವಿದ್ಯಾರ್ಥಿಗಳಿಗೆ ಸೂಕ್ತ ಬಹುಮಾನವನ್ನು ನೀಡುವುದು ಹಾಗೂ ಉಳಿದವರ ಭಾಗವಹಿಸುವಿಕೆಗಾಗಿ ಪ್ರಶಂಸನಾ ಪತ್ರಗಳನ್ನು ನೀಡಲು ಕ್ರಮವಹಿಸಲು" ಸೂಚಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಎಲ್ಲ ಸರ್ಕಾರಿ, ಅನುದಾನಿತ ಕಾಲೇಜುಗಳು ಹಾಗೂ ಖಾಸಗಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಈ ಪ್ರಬಂಧಸ್ಪರ್ಧೆಯನ್ನು ಆಯೋಜಿಸುವ ಸಂಬಂಧವಾಗಿ ನಿರ್ವಹಿಸಬೇಕಾದ ಕರ್ತವ್ಯಗಳು ಈ ಕೆಳಕಂಡಂತಿವೆ:

1. "21ನೇ ಶತಮಾನದ ಆತಂಕಗಳು ಮತ್ತು ಗಾಂಧೀಜಿಯವರ ವಿಚಾರಗಳು ಪ್ರತಿಪಾದಿಸುವ ಪರಿಹಾರಗಳು" ಎಂಬ ವಿಷಯದ ಕುರಿತು ಪ್ರಬಂಧಸ್ಪರ್ಧೆಯನ್ನು ತಮ್ಮ ಕಾಲೇಜುಗಳ ಪದವಿ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ದಿ: 24-01-2024 ರಿಂದ 31-01-2024ರೊಳಗೆ ತರಗತಿವಾರು ಆಯೋಜಿಸುವುದು.

2. ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗೆ ಸದರಿ ಪ್ರಬಂಧಸ್ಪರ್ಧೆ ಕಾರ್ಯಕ್ರಮದ ಅನುಷ್ಠಾನದ ಕುರಿತು ಅಂಕಿಅಂಶಗಳು ಹಾಗೂ ಛಾಯಾಚಿತ್ರಗಳನ್ನು ಒಳಗೊಂಡ ವಿವರಪೂರ್ಣ ವರದಿಯನ್ನು ದಿನಾಂಕ: 05-02-2024ರ ವೇಳೆಗೆ ತಪ್ಪದೆ ಸಲ್ಲಿಸುವುದು.

ಪ್ರಾದೇಶಿಕ ಜಂಟಿ ನಿರ್ದೇಶಕರ ಕರ್ತವ್ಯಗಳು:

1. ತಮ್ಮ ಕಚೇರಿ ವ್ಯಾಪ್ತಿಯ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸದರಿ ಪ್ರಬಂಧಸ್ಪರ್ಧೆ ಕಾರ್ಯಕ್ರಮ ನಡೆಯುವಂತೆ ಮೇಲ್ವಿಚಾರಣೆ ವಹಿಸುವುದು.

2. ತಮ್ಮ ವಲಯವ್ಯಾಪ್ತಿಯ ಕಾಲೇಜುಗಳಿಂದ ಸ್ವೀಕೃತವಾದ ವರದಿಗಳನ್ನು ಕ್ರೋಢೀಕರಿಸಿ, ಕ್ರೋಢೀಕೃತ ವರದಿಯನ್ನು ಇಲಾಖೆಯ ಕೇಂದ್ರ ಕಚೇರಿಯ ಇ-ಮೇಲ್ ವಿಳಾಸ : dce.academic@gmail.com ಕ್ಕೆ ದಿನಾಂಕ: 07-02-2024ರೊಳಗೆ ಸಲ್ಲಿಸುವುದು.

ಕಾಲೇಜು ಶಿಕ್ಷಣ ಆಯುಕ್ತರು
27/1/2024

ಇವರಿಗೆ :

1) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ – ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ – ಸೂಕ್ತ ಕ್ರಮಕ್ಕಾಗಿ.
2) ರಾಜ್ಯದ ಎಲ್ಲಾ ಸರ್ಕಾರಿ / ಖಾಸಗಿ ಅನುದಾನಿತ/ ಖಾಸಗಿ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.

ಪ್ರತಿಯನ್ನು :

1) ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು – 560001.
2) ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು – 560001.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು - 560001.
4) ಕೇಂದ್ರ ಕಛೇರಿಯ ಎಲ್ಲಾ ಮೇಲಾಧಿಕಾರಿಗಳ ಆಪ್ತಶಾಖೆಗೆ - ಮಾಹಿತಿಗಾಗಿ.
5) ಕಛೇರಿ ಪ್ರತಿ.